ಇ) ಪ್ರಸ್ತುತ ವಾರ್ಷಿಕ ಮೂರು ಲಕ್ಷ ಮನೆಗಳನ್ನು ನಿರ್ಮಿಸುವ ಮೂಲಕ 5 ವರ್ಷಗಳಲ್ಲಿ 15 ಲಕ್ಷ ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದ್ದು, ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಹಂತ ಹಂತವಾಗಿ ಎಲ್ಲಾ ಕ್ಷೇತ್ರಗಳಿಗೂ ಮನೆಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು.

ಈ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರಕ್ಕೆ ಪ್ರಸಕ್ತ ಸಾಲಿನಲ್ಲಿ 1307 ಮನೆಗಳ ಗುರಿಯನ್ನು ನೀಡಲಾಗಿದೆ. ವಿವರ ಇಂತಿದೆ.

ಯೋಜನೆ	ವರ್ಷ	ಗುರಿ
ಬಸವ ವಸತಿ ಯೋಜನೆ	2015–16	1000
ಇಂದಿರಾ ಆವಾಸ್ ಯೋಜನೆ	2015–16	307
ಒಟ್ಟು		**1307**

ಗಗನಚುಕ್ಕಿ ಭರಚುಕ್ಕಿ ಜಲಪಾತ

3129 (3655); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರವು ರೂಪಿಸಿರುವ ಯೋಜನೆಗಳಾವುವು;

ಆ) ಕಳೆದ ಎರಡು ವರ್ಷಗಳಿಂದ ರಾಜ್ಯ ಪ್ರವಾಸೋದ್ಯಮದಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು; ಆದಾಯ ಬರುತ್ತಿರುವ ಮೂಲಗಳಾವುವು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

ಇ) ರಾಜ್ಯದ ಪ್ರಸಿದ್ಧ ಜಲಪಾತಗಳಲ್ಲೊಂದಾದ ಗಗನಚುಕ್ಕಿ – ಭರಚುಕ್ಕಿ ಜಲಪಾತದ ಬಳಿ ರೋಪ್‌ವೇ, ಸೇತುವೆ ಜಲಪಾತ ನಿರ್ಮಿಸಲು ಸರ್ಕಾರ ಉದ್ದೇಶಿಸಿದೆಯೆ;

ಈ) ಕಳೆದ ಎರಡು ವರ್ಷಗಳಲ್ಲಿ ಗಗನಚುಕ್ಕಿ ಭರಚುಕ್ಕಿ ಜಲಪಾತಗಳ ಬಳಿ ಆಯೋಜಿಸಲಾದ "ಜಲಪಾತ ಉತ್ಸವಕ್ಕೆ" ಸರ್ಕಾರವು ಬಿಡುಗಡೆ

ಮಾಡಿ, ವೆಚ್ಚ ಮಾಡಲಾದ ಹಣವೆಷ್ಟು; (ವರ್ಷವಾರು ಪ್ರತ್ಯೇಕವಾದ ನೀಡುವುದು);

ಊ) ಈ ಎರಡು ಜಲಪಾತಗಳ ವ್ಯಾಪ್ತಿಯಲ್ಲಿ ರಕ್ಷಣೆ ಮತ್ತು ಶುಚಿತ್ವವನ್ನು ಕಾಪಾಡಲು ಯಾವ ರೀತಿ ಕ್ರಮಗಳನ್ನು ಕೈಗೊಳ್ಳಲಾಗಿದೆ; (ವಿವರಗಳನ್ನು ನೀಡುವುದು)?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಈ ಕೆಳಕಂಡ ಕ್ರಮಗಳನ್ನು ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಳ್ಳಲಾಗಿದೆ.

1. ಕರ್ನಾಟಕ ಟೂರಿಸಂ ವಿಷನ್ ಗ್ರೂಪ್ ಸ್ಥಾಪನೆ ಮಾಡಲಾಗಿದೆ.
2. ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ಕಾರ್ಯಕ್ರಮದಡಿ ಪ್ರವಾಸಿ ತಾಣಗಳನ್ನು ದತ್ತು ನೀಡುವ ಕಾರ್ಯಕ್ರಮ ಜಾರಿಗೆ ತರಲಾಗಿದೆ.
3. ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಲಭ್ಯ ನಿಯಮಿತ (ಕೆ.ಟಿ.ಐ.ಎಲ್.) ಸ್ಥಾಪಿಸಲು ಕ್ರಮವಹಿಸಲಾಗಿದೆ.
4. ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ ಮೂಲ ಸೌಕರ್ಯ ಅಭಿವೃದ್ಧಿ ಕಾಯ್ದೆ ಜಾರಿಗೊಳಿಸಲು ಕ್ರಮವಹಿಸಲಾಗಿದೆ.
5. ರಾಜ್ಯದಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ಕೈಗೊಳ್ಳಲು ಉದ್ದೇಶಿಸಿರುವ ಹೂಡಿಕೆದಾರರಿಗೆ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಲು ಬಂಡವಾಳ ಸ್ನೇಹಿ ಪ್ರವಾಸೋದ್ಯಮ ನೀತಿ 2015–20 ನ್ನು ಜಾರಿಗೆ ತರಲಾಗಿದೆ.
6. ಎಲ್ಲಾ ಜಿಲ್ಲೆಗಳಿಗೆ ಪ್ರವಾಸೋದ್ಯಮ ಸಮಾಲೋಚಕರನ್ನು ನೇಮಕಾತಿ ಮಾಡಲಾಗಿದೆ.
7. ಸಮಗ್ರ ಕರಾವಳಿ ಪ್ರವಾಸಿ ವೃತ್ತವನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ಆರಂಭಿಸಲಾಗಿದೆ.

8. ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಗಳಿಗೆ ಖಾಸಗೀ ಸ್ಟೇಕ್ ಹೋಲ್ಡರ್‌ಗಳನ್ನು ಸೇರ್ಪಡೆ ಮಾಡಿ ಪುನರ್ ರಚಿಸಲಾಗಿದೆ.
9. ರಾಜ್ಯದಲ್ಲಿರುವ ಹೋಂ ಸ್ಟೇಗಳನ್ನು ಸರ್ವೆ ಮಾಡಲು ಏಜೆನ್ಸಿ ನೇಮಕ ಮಾಡಿ ಅವರಿಂದ ವರದಿ ಪಡೆಯಲು ಕ್ರಮವಹಿಸಲಾಗಿದೆ.
10. ಪ್ರವಾಸೋದ್ಯಮ ಇಲಾಖೆಯಿಂದ ನಿರ್ಮಿಸಿರುವ 18 ಪ್ರವಾಸಿ ಸೌಲಭ್ಯಗಳನ್ನು ಖಾಸಗೀ ನಿರ್ವಹಣೆಗೆ ವಹಿಸಲು ಕ್ರಮವಹಿಸಲಾಗಿದೆ.
11. ಪ್ರವಾಸಿ ಉತ್ಪನ್ನಗಳ ಮೌಲ್ಯಮಾಪನ ಕಾರ್ಯಕ್ರಮ ಆರಂಭಿಸಲಾಗಿದೆ.
12. ವ್ಯಾಪಕ ಪ್ರವಾಸೋದ್ಯಮ ಪ್ರಚಾರ ಮತ್ತು ಉತ್ತೇಜನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
13. ಕರಾವಳಿ ನಿಯಂತ್ರಣ ವಲಯ (ಸಿ.ಆರ್.ಝಡ್)ದ ನಿಯಮಾವಳಿಗಳನ್ನು ಸಡಿಲಿಸುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.
14. ಫೆಸಿಫಿಕ್ ಏಷಿಯಾ ಟ್ರಾವೆಲ್ ಅಸೋಸಿಯೇಷನ್ (ಪಾಟಾ) ಪ್ರವಾಸಿ ಮೇಳ–2015ನ್ನು ಈ ಬಾರಿ ಬೆಂಗಳೂರಿನಲ್ಲಿ ಆಯೋಜಿಸಲಾಗುತ್ತಿದೆ.

ಆ) ಪ್ರವಾಸೋದ್ಯಮ ಇಲಾಖೆಯು ಒಂದು ಸೇವಾ ಆಧಾರಿತ ಇಲಾಖೆಯಾಗಿರುತ್ತದೆ. ಪ್ರವಾಸೋದ್ಯಮದಿಂದಾಗಿ ಪರೋಕ್ಷ ಆದಾಯವನ್ನು ನಿರೀಕ್ಷಿಸಬಹುದೇ ಹೊರತು ಪ್ರತ್ಯಕ್ಷ ಆದಾಯವನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಹೀಗಾಗಿ ಪ್ರವಾಸಿಗರ ಭೇಟಿಯಿಂದ ತೆರಿಗೆ, ವ್ಯಾಪಾರ ಮತ್ತು ಸಾರಿಗೆ ಮುಂತಾದ ಮೂಲಗಳಿಂದ ಮಾತ್ರ ಸರ್ಕಾರಕ್ಕೆ ಪರೋಕ್ಷ ಆದಾಯವನ್ನು ನಿರೀಕ್ಷಿಸಬಹುದು.

ಇ) ಈ ರೀತಿಯ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.

ಈ) ಕಳೆದ ಎರಡು ವರ್ಷಗಳಲ್ಲಿ ಗಗನಚುಕ್ಕಿ ಮತ್ತು ಭರಚುಕ್ಕಿ ಜಲಪಾತಗಳ ಉತ್ಸವಕ್ಕೆ ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಅನುದಾನದ ವಿವರ ಕೆಳಕಂಡಂತಿದೆ:

(ರೂ. ಲಕ್ಷಗಳಲ್ಲಿ)

ಉತ್ಸವಗಳು	2013–14		2014–15	
	ಬಿಡುಗಡೆ	ಖರ್ಚು	ಬಿಡುಗಡೆ	ಖರ್ಚು
ಗಗನಚುಕ್ಕಿ	25.00	25.00	25.00	25.00
ಭರಚುಕ್ಕಿ	20.00	20.00	25.00	25.00
ಒಟ್ಟು	**45.00**	**45.00**	**50.00**	**50.00**

ಉ) ಚಾಮರಾಜನಗರ ಜಿಲ್ಲೆಯ ಭರಚುಕ್ಕಿ ಜಲಪಾತದ ನಿರ್ವಹಣೆಗಾಗಿ ಉಪ ವಿಭಾಗಾಧಿಕಾರಿಗಳು, ಕೊಳ್ಳೇಗಾಲರವರ ಅಧ್ಯಕ್ಷತೆಯಲ್ಲಿ ಭರಚುಕ್ಕಿ ಅಭಿವೃದ್ಧಿ ಸಮಿತಿ ರಚಿಸಲಾಗಿರುತ್ತದೆ. ಸದರಿ ಸಮಿತಿಯು ಪ್ರವಾಸಿಗರ ರಕ್ಷಣೆ ಸಂಬಂಧ 07 ಜನ ಕಾವಲುಗಾರರನ್ನು ನೇಮಕ ಮಾಡಿದ್ದು, ಸ್ವಚ್ಛತೆ ಕಾಪಾಡಲು 2 ಜನ ಶುಚಿಗಾರರನ್ನು ನೇಮಕ ಮಾಡಿರುತ್ತದೆ. ಮಂಡ್ಯ ಜಿಲ್ಲೆಯ ಗಗನಚುಕ್ಕಿ ಜಲಪಾತ ಪ್ರದೇಶದಲ್ಲಿ ಪ್ರವಾಸಿಗರ ರಕ್ಷಣೆಗಾಗಿ ಬ್ಲಫ್ ಪೊಲೀಸ್ ಹೊರಠಾಣೆಯನ್ನು ತೆರೆದು ಅಲ್ಲಿ ಒಬ್ಬ ಮುಖ್ಯ ಪೊಲೀಸ್ ಪೇದೆ ಹಾಗೂ ಇಬ್ಬರು ಪೊಲೀಸ್ ಪೇದೆಗಳನ್ನು ಪ್ರತಿ ನಿತ್ಯ ಪೊಲೀಸ್ ಇಲಾಖೆಯಿಂದ ನಿಯೋಜಿಸಲಾಗಿರುತ್ತದೆ. ಇದಲ್ಲದೇ ಪ್ರತಿ ಶನಿವಾರ ಮತ್ತು ಭಾನುವಾರ ಬೆಳಕವಾಡಿ ಪೋಲಿಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನಿರಂತರವಾಗಿ ಪೊಲೀಸ್ ರೌಂಡ್ಸ್‌ನಲ್ಲಿ ಇರುತ್ತಾರೆ.